**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/10/ಚಿಕಫ/2014-15 /1720

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 31-08-2015

**ವಿಷಯ:** ಕಾರ್ಯನಿರತ ವೇಳಾ ಕಾರ್ಯಸೂಚಿ.

**ಸುತ್ತೋಲೆ**

ರಾಜ್ಯ ಸರಕಾರದ ಶಿಕ್ಷಣ ಸಂಸ್ಥೆಗಳು, ವಾರದಲ್ಲಿ 6 ದಿನಗಳು, ದಿನಗಳಲ್ಲಿ ಕನಿಷ್ಠ 8 ಗಂಟೆಗಳು ಕಾರ್ಯನಿರ್ವಹಿಸಬೇಕಾಗಿದೆ. ಆದ್ದರಿಂದ ರಾಜ್ಯದ ಎಲ್ಲಾ ಚಿತ್ರಕಲಾ ಮಹಾವಿದ್ಯಾಲಯಗಳು/ಶಾಲೆಗಳು ದಿನದ 8 ಗಂಟೆಗಳು ಕಾರ್ಯನಿರ್ವಹಿಸಬೇಕು. ತರಗತಿಗಳನ್ನು ಬೆಳಿಗ್ಗೆ 9 ಗಂಟೆಗೆ ಪ್ರಾರಂಭಿಸಿ ಸಾಯಂಕಾಲ 5 ಗಂಟೆಗೆ ಮುಕ್ತಾಯಗೊಳಿಸಬೇಕು. ಅದರಂತೆ ದಿನ ನಿತ್ಯದ ವೇಳಾಪಟ್ಟಿಯನ್ನು ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಒಟ್ಟು 8 ಗಂಟೆಗಳು ಕರ್ತವ್ಯ ನಿರತ ಕಾಲವೆಂದು ಪರಿಗಣಿಸಿ ವೇಳಾ ಪಟ್ಟಿ ಹೊರಡಿಸಿ ಅದರಂತೆ ವಿದ್ಯಾರ್ಥಿಗಳಿಗೆ ತರಗತಿಗಳನ್ನು ನಡೆಸಬೇಕೆಂದು ಆದೇಶಿಸಲಾಗಿದೆ.

ಶನಿವಾರ ಬೆಳಿಗ್ಗೆ 9 ಗಂಟೆಯಿಂದ 1 ಗಂಟೆಯವರೆಗೆ ಕಾರ್ಯನಿರ್ವಹಿಸುವುದು.

ಚಿತ್ರಕಲಾ ಮಹಾವಿದ್ಯಾಲಲಯಗಳು/ಶಾಲೆಗಳು ಕಛೇರಿಗಳ ಸಮಯದಲ್ಲಿ ಯಾವುದೇ ಬದಲಾವಣೆ ಇಲ್ಲ ಅವುಗಳು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5-30 ಗಂಟೆವರೆಗೆ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಆಡಳಿತ)

3/8 31/8 3/8/15

ಪ್ರತಿ:1)ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಹಾಗೂ ಅನುದಾನರಹಿತ ಚಿತ್ರಕಲಾ ಶಾಲೆ/ಮಹಾವಿದ್ಯಾಲಯಗಳ ಪ್ರಾಚಾರ್ಯರು ಹಾಗೂ ಆಡಳಿತ ಮಂಡಳಿಯವರಿಗೆ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

2) ಜ. ಆಡಳಿತ ವಿಭಾಗ, ತಾಂ.ಶಿ.ನಿ. ಬೆಂಗಳೂರು.

## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/10/ಚಿಕಫ/2014-15 //7೨೦

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 31-08-2015

## ಸುತ್ತೋಲೆ

ವಿಷಯ: ವಿಶ್ವವಿದ್ಯಾನಿಯಲಗಳ ನಿಯಮಾನುಸಾರ ಶೈಕ್ಷಣಿಕ ಚಟುವಟಿಕೆ ನಡೆಸಲು, ನಿರ್ವಹಿಸಬೇಕಾದ ದಾಖಲೆಗಳು ಹಾಗೂ ಉಪನ್ಯಾಸಕರ ಕಾರ್ಯಭಾರ (ವರ್ಕ್ ಲೋಡ) ಸಂಪೂರ್ಣ ಮಾಹಿತಿ ನೀಡುವದು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸದರಿ ಸಂಸ್ಥೆಯ ಪ್ರಾಚಾರ್ಯರು, ವಿಶ್ವವಿದ್ಯಾಲಯಗಳ ನಿಯಮಾನುಸಾರ ಶೈಕ್ಷಣಿಕ ಚಟುವಟಿಕೆ ನಡೆಸಲು, ನಿರ್ವಹಿಸಬೇಕಾದ ದಾಖಲೆಗಳ ಸಂಪೂರ್ಣ ಮಾಹಿತಿ ಮತ್ತು ಮಾದರಿ ದಾಖಲೆಗಳ ಪ್ರತಿಗಳನ್ನು ನಿರ್ದೇಶನಾಲಯಕ್ಕೆ ಕಳುಹಿಸಲು ಮತ್ತು ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸಂಪೂರ್ಣ ವಿವರ ನೀಡುವದು. ಅವರ ಕಾರ್ಯಭಾರ (ವರ್ಕ್‌ಲೋಡ)ದ ವೇಳಾಪಟ್ಟಿಯ ದಾಖಲಾತಿಯೊಂದಿಗೆ 10 ದಿನದೊಳಗಾಗಿ ನಿರ್ದೇಶನಾಲಯಕ್ಕೆ ಕಳುಹಿಸಲು ಆದೇಶಿಸಲಾಗಿದೆ.

ಜಂಟಿ ನಿರ್ದೇಶಕರು(ಆಡಳಿತ)
31/8/15

**ಪ್ರತಿ:** 1)ರಾಜ್ಯದ ಎಲ್ಲಾ ಅನುದಾನಿತ ಚಿತ್ರಕಲಾ ಶಾಲೆ/ಮಹಾವಿದ್ಯಾಲಯಗಳ ಪ್ರಾಚಾರ್ಯರರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

2) ಇ-ಆಡಳಿತ ವಿಭಾಗ, ತಾಂ.ಶಿ.ಇ. ಬೆಂಗಳೂರು.